75

## ಕರ್ನಾಟಕ ವಿಧಾನ ಪರಿಷತ್ತು

## ಶೂನ್ಯ ವೇಳೆ ಪ್ರಸ್ತಾಪ

ವಿಷಯ: ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್ ಎಸ್ ಗೋಪಿನಾಥ್ ಇವರು "ನಕಲಿ ವೈದ್ಯರ ಹಾವಳಿ ತಡೆಗಟ್ಟಲು ಸರ್ಕಾರ ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದ್ದರೂ ಅಮಾಯಕರ ಜೀವನ ಜೊತೆ ಚೆಲ್ಲಾಟವಾಡುತ್ತಿರುವ ನಕಲಿ ವೈದ್ಯರು ರಾಜ್ಯಾದ್ಯಂತ ಬೇರು ಬಿಟ್ಟಿದ್ದಾರೆ ಪ್ರಸ್ತುತ ಮಾಹಿತಿ ಪ್ರಕಾರ 1436 ನಕಲಿ ವೈದ್ಯರು ಇದ್ದಾರೆ ಎನ್ನಲಾಗುತ್ತಿದೆ. ಆದರೆ ಇಂಥವರ ಸಂಖ್ಯೆ ದುಪಟ್ಟಾದರೂ ಅಚ್ಚರಿಲ್ಲ ಎನ್ನುತ್ತಿರುವ ಆರೋಗ್ಯ ಇಲಾಖೆಯ ಮೂಲಗಳು ದುರ್ಬಲ ಕಾನೂನಿನಿಂದಾಗಿ ಅವರನ್ನು ಮಟ್ಟ ಹಾಕಲು ಸಾಧ್ಯವಾಗುತ್ತಿಲ್ಲ ಎಂದು ಅಸಹಾಯಕತೆ ವ್ಯಕ್ತಪಡಿಸುತ್ತಿವೆ. ನಕಲಿ ವೈದ್ಯರ ಹಾವಳಿ ನಿಯಂತ್ರಣಕ್ಕೆ ಕಾನೂನು ಇದೆ ಆದರೆ ಅದು ಕಾಗದದ ಹುಲಿಯಾಗಿ ಉಳಿದುಕೊಂಡಿದೆ ಇದರ ದುರ್ಲಾಭ ಪಡೆಯುತ್ತಿರುವ ವಂಚಕರು ಕಾನೂನು ಬಾಹಿರವಾಗಿ ಚಿಕಿತ್ಸೆ ನೀಡುತ್ತಾ ಜನರ ಜೀವ ತೆಗೆಯುತ್ತಿದ್ದಾರೆ. ಇಂಥ ನಯ ವಂಚಕರ ನಿಯಂತ್ರಣಕ್ಕೆ ಸರ್ಕಾರ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿ ರಚಿಸಿದೆ. ಇದು ಸ್ವಯತ್ತ ಸಂಸ್ಥೆಯಾಗಿದ್ದರೂ ಕಠಿಣ ಕ್ರಮ ಕೈಗೊಳ್ಳಲು ಪರಿಮಾಧಿಕಾರ ಬಲ ಮಾತ್ರ ಇಲ್ಲ ಪ್ರಭಾವಿಗಳು ಮತ್ತು ಸ್ಥಳೀಯರ ರಕ್ಷಣೆಯಲ್ಲಿ ವೃತ್ತಿ ನಿಭಾಯಿಸುತ್ತಿರುವ ಈ ವಂಚಕರು ಅಷ್ಟು ಸುಲಭವಾಗಿ ದಾಳಿಯ ಬಲೆಗೆ ಬೀಳುವುದಿಲ್ಲ. ಕೆಲವೊಮ್ಮೆ ಸ್ಥಳೀಯರೇ ಕಾರ್ಯಾಚರಣೆಗೆ ತೆರಳಿದ ಅಧಿಕಾರಿಗಳ ಕರ್ತವ್ಯಕಡ್ಡಿ ಪಡಿಸುತ್ತಾರೆ. ಹಾಗಾಗಿ ಅಧಿಕಾರಿಗಳು ನಕಲಿ ವೈದ್ಯರ ವಿರುದ್ಧ ಕಾರ್ಯಾಚರಣೆ ಕೈಗೊಳ್ಳಲು ಹಿಂದೇಟು ಹಾಕುವಂತಾಗಿದೆ ಯಾವುದಾದರೂ ಸಾಮಾನ್ಯ ಪದವಿ ಓದಿ ಇಲ್ಲ ಎಸ್ ಎಸ್ ಎಲ್ ಸಿ ಪಿಯುಸಿ ಮುಗಿಸಿದವರು ಪಟ್ಟಣದ ಕಾಸಿಗೆ ಆಸ್ಪತ್ರೆ ಕ್ಲಿನಿಕ್ ನರ್ಸಿಂಗ್ ಹೋಮ್ ಗಳಲ್ಲಿ ಕೆಲಕಾಲ ಸಹಾಯಕರಾಗಿ ಕೆಲಸ ಮಾಡುತ್ತಾರೆ ಅಲ್ಲಿ ಚುಚ್ಚುಮದು ನೀಡುವುದು ಕಲಿತು ಜ್ವರ ಕೆಮ್ಮು ಶೀತ ನೆಗಡಿ ವಾಂತಿಭೇದಿಯ ಸಾಮಾನ್ಯವಾಗಿ ಕೊಡುವ ಔಷಧದ ಬಗ್ಗೆ ತಿಳಿದುಕೊಂಡು ಹಳ್ಳಿಗಳಿಗೆ ವೈದ್ಯರ ವೇಷದಲ್ಲಿ ಬರುತ್ತಾರೆ. ಇಂಥವರ ವಿರುದ್ಧ ಸರ್ಕಾರವು ಕಠಿಣ ಕ್ರಮ ತೆಗೆದುಕೊಳ್ಳುವ ಬಗ್ಗೆ ಶೂನ್ಯವೇಳೆಯ ಪ್ರಸ್ತಾಪಕ್ಕೆ.

ಮತ್ತು

ವಿಷಯ:- ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ, ಇವರು "ವಂಚಕರಿಗೆ ದುರ್ಬಲ ಕಾನೂನಿನ ಲಾಭ ಹಳ್ಳಿಗಳಲ್ಲಿ ಪ್ರಾಕ್ಟಿಸ್. ರಾಜ್ಯದಲ್ಲಿ 1436 ನಕಲಿ ವೈದ್ಯರು!" ಎಂಬ ಶೀರ್ಷಿಕೆಯಡಿ ದಿನಾಂಕ 11/12/2023 ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ನಕಲಿ ವೈದ್ಯರ ಹಾವಳಿ ತಡೆಗಟ್ಟಲು ಸರಕಾರ ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದ್ದರೂ ಅಮಾಯಕರ ಜೀವದ ಜತೆ ಚೆಲ್ಲಾಟವಾಡುತ್ತಿರುವ ನಕಲಿ ವೈದ್ಯರು ರಾಜ್ಯಾದ್ಯಂತ ಬೇರು ಬಿಟ್ಟಿದ್ದಾರೆ. ಪ್ರಸ್ತುತ ಮಾಹಿತಿ ಪ್ರಕಾರ 1,436 ನಕಲಿ ವೈದ್ಯರು ಇದ್ದಾರೆ ಎನ್ನಲಾಗುತ್ತಿದೆ. ಆದರೆ, ಇಂಥವರ ಸಂಖ್ಯೆ ದುಪ್ಪಟ್ಟಾದರೂ ಅಚ್ಚರಿಯಿಲ್ಲ ಎನ್ನುತ್ತಿರುವ ಆರೋಗ್ಯ ಇಲಾಖೆ ಮೂಲಗಳು, ದುರ್ಬಲ ಕಾನೂನಿನಿಂದಾಗಿ ಅವರನ್ನು ಮಟ್ಟ ಹಾಕಲು ಸಾಧ್ಯವಾಗುತ್ತಿಲ್ಲ ಎಂದು ಅಸಹಾಯಕತೆ ವ್ಯಕ್ತಪಡಿಸುತ್ತಿವೆ.

ನಕಲಿ ವೈದ್ಯರ ಹಾವಳಿ ನಿಯಂತ್ರಣಕ್ಕೆ ಕಾನೂನು ಇದೆ. ಆದರೆ ಅದು ಕಾಗದದ ಹುಲಿಯಾಗಿ ಉಳಿದುಕೊಂಡಿದೆ. ಇದರ ದುರ್ಲಾಭ ಪಡೆಯುತ್ತಿರುವ ವಂಚಕರು ಕಾನೂನು ಬಾಹಿರವಾಗಿ ಚಿಕಿತ್ಸೆ ನೀಡುತ್ತಾ ಜನರ ಜೀವ ತೆಗೆಯುತ್ತಿದ್ದಾರೆ. ಇಂತಹ ನಯವಂಚಕರ ನಿಯಂತ್ರಣಕ್ಕೆ ಸರಕಾರ "ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿ" ರಚಿಸಿದ್ದರೂ ಇವರು ತಮ್ಮ ಜಾಲವನ್ನು ವಿಸ್ತರಿಸಿದ್ದಾರೆ.

. . . 2

Scanned with OKEN Scanner

- ಸಾರ್ವಜನಿಕರ ಆರೋಗ್ಯದ ಜೊತೆ ಚೆಲ್ಲಾಟವಾಡುವ ಇಂತವರ ವಿರುದ್ಧ ಆರೋಗ್ಯ ಇಲಾಖೆ, ಪೊಲೀಸ್, ಖಾಸಗಿ ವೈದ್ಯರ ಸಂಘದ ಪ್ರತಿನಿಧಿಗಳನ್ನೊಳಗೊಂಡ ಕಾರ್ಯಪಡೆಯನ್ನು ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ರಚಿಸಬೇಕು
- ಗ್ರಾಮ ಪಂಚಾಯತಿಯಿಂದ ಜಿಲ್ಲಾ ಮಟ್ಟದವರೆಗೆ ನಕಲಿ ವೈದ್ಯರ ವಿರುದ್ಧ ಸಾರ್ವಜನಿಕರು ದೂರು ನೀಡುವ ವ್ಯವಸ್ಥೆ ಜಾರಿಯಾಗಬೇಕು.
- ವೈದ್ಯರ ಪ್ರಾಕ್ಟಿಸ್‌ಗೆ ಪರವಾನಗಿ ಹಾಗೂ ವರ್ಷಕ್ಕೊಮ್ಮೆ ನವೀಕರಣ ಮಾಡುವಾಗ ದಾಖಲೆಗಳ ಪರಿಶೀಲನೆ ಮಾಡಬೇಕು.
- ಹೊರ ರಾಜ್ಯಗಳ ವೈದ್ಯ ಪ್ರಮಾಣ ಪತ್ರ ಪಡೆದು ಕರ್ನಾಟಕದಲ್ಲಿ ಪ್ರಾಕ್ಟಿಸ್ ಮಾಡುವವರ ಮೇಲೆ ಹೆಚ್ಚು ನಿಗಾವಹಿಸಬೇಕು.
- ನಕಲಿ ವೈದ್ಯರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸಬೇಕು. ಮುಂದೆ ಪ್ರಾಕ್ಟಿಸ್ ಮಾಡದಂತೆ ಆಜೀವ ನಿಷೇಧ ಹೇರಬೇಕು.

ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ನಕಲಿ ವೈದ್ಯರ ವಿರುದ್ಧ ಇಲಾಖೆಯು ತೀಕ್ಷ್ಣ ಹಾಗು ನಿಷ್ಠುರ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:

<u>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:</u>

ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ 2007ರ ಸೆಕ್ಷನ್ 2(K) ಯು "ವೈದ್ಯವೃತ್ತಿಗ" ಪರಿಭಾಷೆಯನ್ನು ತಿಳಿಸುತ್ತದೆ. ಇದರನ್ವಯ ವೈದ್ಯ ವೃತ್ತಿಗನು ತಾನು ವ್ಯಾಸಂಗ ಮಾಡಿದ, ಅರ್ಹತೆ ಪಡೆದ ಮತ್ತು ವೈದ್ಯ ಪದ್ಧತಿಯಲ್ಲಿ ವೃತ್ತಿ ನಡೆಸುವುದಕ್ಕಾಗಿ, ಸದರಿ ಪರಿಭಾಷೆಯಲ್ಲಿ ನಮೂದಿಸಿರುವ ಅಧಿನಿಯಮಗಳ ಅಡಿಯಲ್ಲಿ ನೋಂದಾಯಿತನಾದ ವ್ಯಕ್ತಿಯನ್ನು ಹೊರತುಪಡಿಸಿ ಇತರೆ ಯಾವುದೇ ವ್ಯಕ್ತಿಯು ಕರ್ನಾಟಕ ರಾಜ್ಯದಲ್ಲಿ ಖಾಸಗಿಯಾಗಿ ವೈದ್ಯ ವೃತ್ತಿ ನಡೆಸಲು ಅವಕಾಶ ಇರುವುದಿಲ್ಲ.

ರಾಜ್ಯದಲ್ಲಿ ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲು ಕೆಪಿಎಂಇ ಅಧಿನಿಯಮ 2007, ಸೆಕ್ಷನ್ 21 ರಂತೆ ತಾಲ್ಲೂಕು ಆರೋಗ್ಯ ಅಧಿಕಾರಿಗಳನ್ನು ಪ್ರಾಧಿಕೃತ ಅಧಿಕಾರಿಗಳನ್ನಾಗಿ ನೇಮಿಸಿ ಕ್ರಮಕೈಗೊಳ್ಳಲಾಗುತ್ತಿದೆ ಮತ್ತು ಪ್ರಾಧಿಕೃತ ಅಧಿಕಾರಿಗಳು ಎಲ್ಲಾ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ ಭೇಟಿ ನೀಡಿ ನಕಲಿ ವೈದ್ಯರಾಗಿದ್ದಲ್ಲಿ, ಆಯಾ ಜಿಲ್ಲೆಯ ಕೆಪಿಎಂಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರವು ಕೆ.ಪಿಎಂ.ಇ ಅಧಿನಿಯಮ 2007, ಸೆಕ್ಷನ್ 21, 22 ಹಾಗೂ ಕೆ.ಪಿಎಂ.ಇ ತಿದ್ದುಪಡಿ ಅಧಿನಿಯಮ 2017 ರ ಸೆಕ್ಷನ್ 19(1) ರ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಅದರಂತೆ, ರಾಜ್ಯದಲ್ಲಿ 1436 ನಕಲಿ ವೈದ್ಯರು ಪತ್ತೆಯಾಗಿದ್ದು, ಇದರಲ್ಲಿ 506 ಕ್ಲಿನಿಕ್‌ಗಳನ್ನು ಮುಚ್ಚಿಸಲಾಗಿದೆ, 117 ಕ್ಲಿನಿಕ್‌ಗಳಿಗೆ ನೋಟೀಸ್ ನೀಡಲಾಗಿದೆ ಹಾಗೂ 214 ಪ್ರಕರಣಗಳು ನ್ಯಾಯಾಲಯದಲ್ಲಿ ದಾಖಲಾಗಿವೆ ಮತ್ತು 599 ಪ್ರಕರಣಗಳು ಜಿಲ್ಲಾ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರದಲ್ಲಿ ವಿಚಾರಣಾ ಹಂತದಲ್ಲಿರುತ್ತದೆ.

ಸಾರ್ವಜನಿಕರು ನಕಲಿ ವೈದ್ಯರು ಚಿಕಿತ್ಸೆ ನೀಡುತ್ತಿರುವುದು ಕಂಡುಬಂದಲ್ಲಿ, ಅಂತಹವರ ವಿರುದ್ಧ ಆಯಾ ತಾಲ್ಲೂಕು ಆರೋಗ್ಯ ಅಧಿಕಾರಿಗಳಿಗೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ದೂರು ನೀಡಬಹುದಾಗಿದೆ.

...3

Scanned with OKEN Scanner

ರಾಜ್ಯದಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆಯನ್ನು ನಡೆಸಲು ನೀಡುವ ಪರವಾನಿಗೆಯು ಪ್ರತಿ 5 ವರ್ಷಗಳಿಗೊಮ್ಮೆ ನವೀಕರಿಸಬೇಕಾಗಿರುತ್ತದೆ. ನವೀಕರಣ ಮಾಡುವಾಗ ದಾಖಲೆಗಳ ಪರಿಶೀಲನ ಮಾಡಲಾಗುತ್ತಿದೆ.

ಕರ್ನಾಟಕ ರಾಜ್ಯದಲ್ಲಿ ಅರ್ಹ ವಿದ್ಯಾರ್ಹತೆಯಿಲ್ಲದ ಮತ್ತು ಅಧಿಕೃತ ನೊಂದಣಿ ಹೊಂದದ ವೈದ್ಯ ವೃತ್ತಿ ನಡೆಸುತ್ತಿರುವ ನಕಲಿ ವೈದ್ಯರ ವಿರುದ್ಧ ಕಾರ್ಯಚರಣೆ ನಡೆಸಲು ಕಾರ್ಯ ವ್ಯಾಪ್ತಿ ಹೊಂದಿರುವ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಯು ಪರಿಣಾಮಕಾರಿಯಾಗಿ ನಕಲಿ ವೈದ್ಯರನ್ನು ನಿಗ್ರಹ ಮಾಡುವ ಉದ್ದೇಶದಿಂದ ಜಿಲ್ಲಾವಾರು ಕಾರ್ಯಪಡೆ (Task Force) ರಚಿಸಿದ್ದು, ಈ ಸಂಬಂಧವಾಗಿ ಸರ್ಕಾರದ ದಿನಾಂಕ:29-08-2017 ರ ಅಧಿಸೂಚನೆ ಸಂಖ್ಯೆ: ಆಕುಕ 325 ಪಿಐಎಂ 2017 ರಂತೆ ಸರ್ಕಾರವು ಈ ಕೆಳಕಂಡವುಗಳನ್ನು ಜಿಲ್ಲಾ ಮಟ್ಟದ ವಿಶೇಷ ಪಡೆಯನ್ನು ರಚಿಸಿ ಅಧಿಸೂಚಿಸಿದೆ.

- ಜಿಲ್ಲಾಧಿಕಾರಿ/ ಅವರ ನಾಮನಿರ್ದೇಶಿತರು.
- ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು/ ಅವರ ನಾಮನಿರ್ದೇಶಿತರು.
- ಜಿಲ್ಲಾ ಆಯುಷ್ ಅಧಿಕಾರಿಗಳು.
- ನೋಂದಣಾಧಿಕಾರಿಗಳು, ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿ.
- ಜಿಲ್ಲಾ ಹಂತದ ನಾಮನಿರ್ದೇಶಿಸಿದ ವಕೀಲರು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ನಾಮನಿರ್ದೇಶಿಸಿದ ಒಬ್ಬ ವಕೀಲರು.
- ಜಿಲ್ಲಾ ಮಟ್ಟದ ಸಮಾಜ ಕಾರ್ಯಕರ್ತರು (ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಂದ ನಾಮನಿರ್ದೇಶಿಸಲ್ಪಟ್ಟ ಒಬ್ಬ ಸಾಮಾಜಿಕ ಕಾರ್ಯಕರ್ತ).

ಜಿಲ್ಲಾ ವಿಶೇಷ ಕಾರ್ಯಪಡೆಯು ತನ್ನ ಜಿಲ್ಲಾ ವ್ಯಾಪ್ತಿಯಲ್ಲಿ ನಕಲಿ ವೈದ್ಯ ವೃತ್ತಿ ನಡೆಸುತ್ತಿರುವ ನಕಲಿ ವೈದ್ಯರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಲು ಕ್ರಮವಹಿಸಲಾಗುತ್ತಿದೆ.

ಮುಂದುವರೆದು ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಯಲ್ಲಿ ನೊಂದಣಿಗಳ ಭದ್ರತೆ ಹಾಗೂ ಪಾರದರ್ಶಕತೆಯನ್ನು ಕಾಪಾಡಿಕೊಳ್ಳುವ ದೃಷ್ಟಿಯಿಂದ 2013 ರಿಂದ ಬಯೋಮೆಟ್ರಿಕ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ವೈದ್ಯರಿಗೆ ನೊಂದಣಿ ನೀಡುವಾಗ ವೈದ್ಯರ ಎಲ್ಲಾ ವಿದ್ಯಾರ್ಹತೆಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಆಧಾರ್ ಕಾರ್ಡ್ ಪ್ರತಿಗಳನ್ನು ಪರಿಶೀಲಿಸಿ ಅವುಗಳನ್ನು ಸ್ಕ್ಯಾನ್ ಮಾಡಿ ಬಯೋಮೆಟ್ರಿಕ್ ತಂತ್ರಾಂಶದಲ್ಲಿ ಅಳವಡಿಸಿಕೊಂಡು ಸದರಿ ವೈದ್ಯರ ಹೆಬ್ಬೆಟ್ಟಿನ ಗುರುತನ್ನು ಸಹ ತಂತ್ರಾಂಶದಲ್ಲಿ ಸ್ಕ್ಯಾನ್ ಮಾಡಿಸಿಕೊಂಡು ತದನಂತರವೇ ನೊಂದಣಿ/ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ. ಈ ರೀತಿ ನೀಡಲಾಗುತ್ತಿರುವ ಪ್ರಮಾಣ ಪತ್ರಗಳಲ್ಲಿ ಪ್ರತ್ಯೇಕ ಬಾರ್‌ಕೋಡ್ ಮತ್ತು ಸದರಿ ವೈದ್ಯರ ಭಾವಚಿತ್ರವನ್ನು ಮುದ್ರಿಸಲಾಗುತ್ತಿದೆ.

ಈ ಮೇಲ್ಕಂಡಂತೆ ವೈದ್ಯರುಗಳಿಗೆ ನೀಡಲಾಗುತ್ತಿರುವ ನೊಂದಣಿಗಳಲ್ಲಿ ಪಾರದರ್ಶಕತೆ ಹಾಗೂ ಭದ್ರತೆಯನ್ನು ಕಾಪಾಡಿಕೊಳ್ಳಲಾಗುತ್ತಿದೆ.

ಸಾರ್ವಜನಿಕರು ಅಂತರ್‌ಜಾಲದಲ್ಲಿ ವೈದ್ಯರ ನೊಂದಣಿಯನ್ನು ಪರಾಮರ್ಶಿಸಬಹುದಾಗಿರುತ್ತದೆ.

ಸಂಖ್ಯೆ: ಆಕುಕ/ಶೂನ್ಯವೇಳೆ/2023

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner